**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ. ಪ್ರತಾಪ್ ಸಿಂಹ ನಾಯಕ್ ರವರು ನಿಯಮ 72 ರ ಅಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಯ ಈ ಕೆಳಕಂಡ ಪ್ರಶ್ನೆಗೆ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರ ಉತ್ತರ.**

**ಪ್ರಶ್ನೆ:** **ಅಡಕೆ ಕೊಳೆರೋಗ ನಿಯಂತ್ರಣಕ್ಕೆ ಬಳಸುವ ಬೋರ್ಡೋ ಮಿಶ್ರಣದ ಮೈಲುತುತ್ತ ದರ ದಿಢೀರನೆ ದುಪ್ಪಟ್ಟಾಗಿದ್ದು, ಇದರಿಂದ ರಾಜ್ಯದ ಅಡಕೆ ಬೆಳೆಗಾರರು ಅಕ್ಷರಶಃ ಕಂಗಾಲಾಗಿದ್ದಾರೆ. ಅನೇಕ ರೋಗ ರುಜಿನಗಳ ನಿರಂತರ ಹೊಡೆತದ ನಡುವೆ ಅಡಕೆ ಬೆಳೆ ಸಂರಕ್ಷಣೆ ಈಗಾಗಲೇ ರೈತರಿಗೆ ದೊಡ್ಡ ಸವಾಲಾಗಿರುವ ಹೊತ್ತಲ್ಲಿ, ಮೈಲುತುತ್ತ ದರ ಈ ರೀತಿ ದಿಢೀರನೆ ಏರಿಕೆಯಾಗಿರುವುದು ಮತ್ತು ದರ ನಿಯಂತ್ರಣಕ್ಕೆ ಸರ್ಕಾರ ಇದುವರೆಗೆ ಯಾವುದೇ ಕ್ರಮ ವಹಿಸದೇ ಇರುವುದು ಅಡಿಕೆ ಬೆಳೆಗಾರರಿಗೆ ಗಾಯದ ಮೇಲೆ ಬರೆ ಎಳೆದಂತಾಗಿದೆ.**

**ಅಡಕೆ ಕೊಳೆರೋಗ ನಿಯಂತ್ರಣಕ್ಕೆ ಸರಿಸುಮಾರು 4 ಬಾರಿ ಔಷಧ ಸಿಂಪಡಣೆ ಮಾಡುವುದು ಅನಿವಾರ್ಯವಾಗಿದ್ದು, ಸಂಕಷ್ಟದಲ್ಲಿರುವ ರಾಜ್ಯದ ಅಡಕೆ ಬೆಳೆಗಾರರ ಹಿತರಕ್ಷಣೆ ಮಾಡುವ ಸಲುವಾಗಿ ಅಡಕೆ ಕೊಳೆರೋಗ ನಿಯಂತ್ರಣಕ್ಕೆ ಬಳಸುವ ಬೋರ್ಡೋ ಮಿಶ್ರಣದ ಮೈಲುತುತ್ತವನ್ನು ಸಂಪೂರ್ಣವಾಗಿ ಉಚಿತವಾಗಿ ನೀಡಲು ಅಥವಾ ಗರಿಷ್ಠ ಮಟ್ಟದ ಸಹಾಯಧನ ನೀಡಲು ಸರ್ಕಾರ ಇದುವರೆಗೆ ಯಾವುದೇ ಕ್ರಮ ಕೈಗೊಳ್ಳದ ಕಾರಣದಿಂದಾಗಿ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರ ಗಮನವನ್ನು ಸೆಳೆಯಲು ಬಯಸುತ್ತೇನೆ.**

**ಉತ್ತರ:** ರಾಜ್ಯದಲ್ಲಿ 7.56 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಅಡಿಕೆ ಬೆಳೆಯನ್ನು ಬೆಳೆಯಲಾಗುತ್ತಿದ್ದು, 11.21 ಲಕ್ಷ ಮೆ.ಟನ್ ಉತ್ಪಾದನೆ ಮಾಡಲಾಗುತ್ತಿದೆ. ಅಡಿಕೆ ಬೆಳೆಯನ್ನು ಪ್ರಮುಖವಾಗಿ ಶಿವಮೊಗ್ಗ, ಚಿಕ್ಕಮಗಳೂರು, ಹಾಸನ, ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ ಹಾಗೂ ಕೊಡಗು ಜಿಲ್ಲೆಗಳಲ್ಲಿ ಬೆಳೆಯಲಾಗುತ್ತಿದೆ.

ಪೀಡೆ ನಾಶಕಗಳ ನಿಯಂತ್ರಣ ಕುರಿತಾದ ವಿಷಯವು ಕೃಷಿ ಇಲಾಖೆಯ ವ್ಯಾಪ್ತಿಗೆ ಒಳಪಟ್ಟಿದ್ದು, ಈ ಬಗ್ಗೆ ಕೃಷಿ ಇಲಾಖೆಯು ಕೆಳಗಿನಂತೆ ಮಾಹಿತಿ ಒದಗಿಸಿರುತ್ತದೆ:-

1. ಪೀಡೆನಾಶಕಗಳ ದರವು ಪೀಡೆನಾಶಕಗಳ ತಯಾರಿಕೆಗೆ ಬಳಕೆಯಾಗುವ ಕಚ್ಚಾ ವಸ್ತುಗಳು ಹಾಗೂ ತಯಾರಿಕಾ ಸಂಸ್ಥೆಗಳ ಮೇಲೆ ಅವಲಂಭಿತವಾಗಿರುತ್ತದೆ. ಬೋರ್ಡೋ ಮಿಶ್ರಣ ತಯಾರಿಕೆಗೆ ಕಾಪರ್ ಸಲ್ಫೇಟ್ ಮತ್ತು ಸುಣ್ಣವನ್ನು ಬಳಸಲಾಗುತ್ತದೆ. ಇತ್ತೀಚಿನ ದಿನಗಳಲ್ಲಿ ಕಾಪರ್ ದರವು ಏರಿಕೆ ಪ್ರವೃತ್ತಿ ಇರುವುದರಿಂದ ಕಾಪರ್ ಸಲ್ಫೇಟ್ ತಯಾರಿಕಾ ವೆಚ್ಚವು ಹೆಚ್ಚಾಗಿರುವುದರಿಂದ ಮಾರುಕಟ್ಟೆಯಲ್ಲಿ ಇದರ ಬೆಲೆ ಗಣನೀಯವಾಗಿ ಏರಿಕೆ ಕಂಡುಬಂದಿರುತ್ತದೆ.

2. ಕಾಪರ್ ಸಲ್ಫೇಟ್ ಪೀಡೆನಾಶಕದ ಬೆಲೆಯೂ ಸೇರಿದಂತೆ ಇತರೆ ಪೀಡೆನಾಶಕಗಳ ಬೆಲೆ ನಿಯಂತ್ರಣವು ಕೀಟನಾಶಕ ಕಾಯ್ದೆ, 1968 ಮತ್ತು ಕಾಯ್ದೆಯನ್ವಯ ರೂಪಿಸಲಾಗಿರುವ ನಿಯಮಾವಳಿಗಳ ವ್ಯಾಪ್ತಿಗೆ ಒಳಪಡುವುದಿಲ್ಲ. ಆದಾಗ್ಯೂ, ತಯಾರಿಕಾ ಸಂಸ್ಥೆಗಳು ನಿಗದಿಪಡಿಸಿರುವ ಗರಿಷ್ಠ ಮಾರಾಟ ಬೆಲೆಗಿಂತ ಹೆಚ್ಚಾಗಿ ಮಾರಾಟ ಮಾಡದಂತೆ ಕೃಷಿ ಇಲಾಖೆಯ ಕೀಟನಾಶಕ ಪರಿವೀಕ್ಷಕರುಗಳ ಮೂಲಕ ರಾಜ್ಯದಲ್ಲಿ ನಿಗಾ ವಹಿಸಲಾಗುತ್ತಿದೆ.

3. ಮೈಲುತುತ್ತ ದರವು ಗರಿಷ್ಠ ಚಿಲ್ಲರೆ ಬೆಲೆ (Maximum Retail Price- MRP) ಗಿಂತ ಹೆಚ್ಚಿನ ದರದಲ್ಲಿ ಮಾರಾಟಮಾಡುವುದು ಕಂಡು ಬಂದಲ್ಲಿ ನಿಯಮಾನುಸಾರ ಕೃಷಿ ಇಲಾಖೆಯಿಂದ ಕ್ರಮ ವಹಿಸಲಾಗುತ್ತದೆ.

4. ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ (NHM) ಅಡಿಕೆ ಬೆಳೆ ಸೇರಿದಂತೆ ತೋಟಗಾರಿಕೆ ಬೆಳೆಗಳ ಸಮಗ್ರ ರೋಗ/ಕೀಟಗಳ ಹಾಗೂ ಪೋಷಕಾಂಶಗಳ ನಿರ್ವಹಣೆಗಾಗಿ ರೂ.5000/- ಪ್ರತಿ ಹೆಕ್ಟೇರ್ ಘಟಕ ವೆಚ್ಚದಲ್ಲಿ ಶೇ.30ರಂತೆ ಪ್ರತಿ ಹೆಕ್ಟೇರಿಗೆ ರೂ.1500/- ರಂತೆ 2 ಹೆಕ್ಟೇರ್ ರವರೆಗೆ ರೂ.3000/- ಗಳ ಸಹಾಯಧನ ನೀಡಲಾಗುತ್ತಿದೆ.

ಬೋರ್ಡೋ ಮಿಶ್ರಣದ ಮೈಲುತುತ್ತವನ್ನು ಸಂಪೂರ್ಣವಾಗಿ ಉಚಿತವಾಗಿ ನೀಡಲು ಅಥವಾ ಗರಿಷ್ಠ ಮಟ್ಟದ ಸಹಾಯಧನ ನೀಡುವ ಪ್ರಸ್ತಾವನೆ ಇರುವುದಿಲ್ಲ.

**ಸಂಖ್ಯೆ: HORTI 153 HGM 2026**

**(ಎಸ್. ಎಸ್. ಮಲ್ಲಿಕಾರ್ಜುನ್)**
**ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು**